# ಶಿಕ್ಷಣ ಜೀವನದ ಶ್ರೇಷ್ಠ ಕೊಡುಗೆ: ಗೌರ್ನರ್

## ಸೇಂಟ್ ಜೋಸೆಫ್ ವಿವಿಯ 2ನೇ ಘಟಿಕೋತ್ಸವದಲ್ಲಿ ಗೆಹಲೋತ್ ಅಭಿಮತ



**ಸಂ.ಕ.ಸಮಾಚಾರ, ಬೆಂಗಳೂರು**

ಶಿಕ್ಷಣವು ಜೀವನದ ಶ್ರೇಷ್ಠ ಕೊಡುಗೆಯಾಗಿದೆ. ಇದು ನಮಗೆ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ ಜೊತೆಗೆ ನೈತಿಕತೆ, ಸಹಾನುಭೂತಿ ಮತ್ತು ಸಾಮಾಜಿಕ ಜವಾಬ್ದಾರಿಯ ಪ್ರಜ್ಞೆಯನ್ನು ನೀಡುತ್ತದೆ. ಶಿಕ್ಷಣವು ವ್ಯಕ್ತಿಯ ಜೀವನವನ್ನು ಹೊಸ ಆಲೋಚನೆಗಳು, ಜ್ಞಾನ ಮತ್ತು ಸಾಧ್ಯತೆಗಳಿಂದ ತುಂಬುವ ನಿರಂತರ ಪ್ರಯಾಣವಾಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ನಗರದ ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದ ಎರಡನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಲ್ಲಿ ಜ್ಞಾನದ ಶಕ್ತಿ ಇದೆ. ಅದನ್ನು ಸಮಾಜದ ಸುಧಾರಣೆ ಮತ್ತು ಮಾನವೀಯತೆಯ ಪ್ರಗತಿಗಾಗಿ ಬಳಸಿದರೆ ಮಾತ್ರ ಈ ಶಕ್ತಿ ಅರ್ಥಪೂರ್ಣವಾಗುತ್ತದೆ ಎಂದರು.ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ಮಾತನಾಡಿ, ಉದಯೋನ್ಮುಖ ತಂತ್ರಜ್ಞಾನಗಳನ್ನು ಬಳಸಿಕೊಳ್ಳಲು ಮತ್ತು ಹಸಿರುಶಕ್ತಿ, ತ್ಯಾಜ್ಯ ನಿರ್ವಹಣೆ, ಆರೋಗ್ಯ ರಕ್ಷಣೆ, ಸೈಬರ್ ಭದ್ರತೆ ಮತ್ತು ಕೃತಕ ಬುದ್ಧಿಮತ್ತೆಯಂತಹ ಸವಾಲುಗಳನ್ನು ಎದುರಿಸಲು ಇಂದಿನ ವಿದ್ಯಾರ್ಥಿಗಳು ನಾವೀನ್ಯತೆಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಈ ವರ್ಷ ಒಟ್ಟು 2,747 ವಿದ್ಯಾರ್ಥಿಗಳು ಪದವಿ ಪಡೆದಿದ್ದಾರೆ. ಹೆಚ್ಚುವರಿಯಾಗಿ, ಶೈಕ್ಷಣಿಕ, ಎನ್‌ಸಿಸಿ, ಕ್ರೀಡೆ ಮತ್ತು ಸಹಪಠ್ಯ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧಕರಿಗೆ 40 ವಿಶೇಷ ಬಹುಮಾನ ನೀಡಲಾಯಿತು. ಭಾರತೀಯ ವಿಜ್ಞಾನ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ನರಸಿಂಹಮೂರ್ತಿ, ವಿಶ್ವವಿದ್ಯಾಲಯದ ಪ್ರೊ–ಚಾನ್ಸೆಲರ್ ಫಾದರ್ ಸ್ವಿಬರ್ಟ್ ಡಿ ಸೆಲ್ವಾ, ವಿಶ್ವವಿದ್ಯಾಲಯದ ಉಪಕುಲಪತಿ ಫಾದರ್ ಡಾ.ವಿಕ್ಟರ್ ಲೋಬೋ ಮತ್ತಿತರರಿದ್ದರು.